**ಸಾಕ್ಷಿಯನ್ನು ಕರೆಸಲಾಯಿತು.** **ಪ್ರಮಾಣ ವಚನ ಮಾಡಿಸಲಾಯಿತು.**

**ದಿಃ 10.07.2026.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ವಿ ಪಿ ವಕೀಲರಿಂದ**

ನಾನು ಈ ಅರ್ಜಿಯಲ್ಲಿ ಅರ್ಜಿದಾರ ಇರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ.

1. ಅಲಭ್ಯ ಪ್ರಮಾಣ ಪತ್ರವನ್ನು ನಿ.ಪಿ.-1 ಎಂದು ಗುರುತಿಸಲಾಯಿತು.
2. ವಂಶವೃಕ್ಷ ನಿ.ಪಿ.-2 ಎಂದು ಗುರುತಿಸಲಾಯಿತು.
3. ಬನವಾಸೆ ಗ್ರಾಮ ಸರ್ವೆ ನಂ.3 ರ ಪಹಣಿ ಪತ್ರಿಕೆಯನ್ನು ನಿಪಿ.3 ಎಂದು ಗುರುತಿಸಲಾಯಿತು.
4. ದಿಃ 24.01.2026 ರ ಜ್ಞಾನ ದೀಪ ದಿನಪತ್ರಿಕೆಯಲ್ಲಿ ಪ್ರಕಟವಾದ ನೋಟೀಸ್ ನ ಆಯ್ದ ಭಾಗವನ್ನು ನಿಪಿ.4 ಎಂದು ದಿನಪತ್ರಿಕೆಯನ್ನು ಗುರುತಿಸಲಾಯಿತು.
5. ದಿಃ 25.01.2026 ರ ಹಾಸನ ಮಾಧ್ಯಮ ದಿನಪತ್ರಿಕೆಯಲ್ಲಿ ಪ್ರಕಟವಾದ ನೋಟೀಸ್ ನ ಆಯ್ದ ಭಾಗವನ್ನು ನಿಪಿ.5 ಎಂದು ದಿನಪತ್ರಿಕೆಯನ್ನು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶಬೇಕೆಂದು ಕೋರಿದ್ದು, ನೀಡಿ ಮುಂದೂಡಲಾಯಿತು.

**ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಓ ಹೇ ಕೇ ಸ ಇ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ ಸಕಲೇಶಪುರ**